## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25ನೇ ಸಾಲಿನಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷರ ವಿವೇಚನಾ ನಿಧಿಯಡಿ ಕಾಮಗಾರಿಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಪಿಡಿಎಸ್ 10 ಐಎಂಎಂ 2024, ದಿನಾಂಕ : 02.04.2024
2. ಸರ್ಕಾರದ ಪತ್ರ ಸಂಖ್ಯೆ: ಪಿಡಿಎಸ್ 24 ಪಿಎಂಎಸ್ 2021, ದಿನಾಂಕ:24.11.2021.
3. ಮಾನ್ಯ ಅಧ್ಯಕ್ಷರು ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಮಾನ್ಯ ಯೋಜನಾ ಸಚಿವರ ಟಿಪ್ಪಣಿ ಸಂಖ್ಯೆ: ಯೋ&ಸಾಂ/ಸ/261/2024,ದಿನಾಂಕ:29.08.2024

*******

**ಪ್ರಸ್ತಾವನೆ**

ಮೇಲೆ ಓದಲಾದ (1)ರಲ್ಲಿ 2024-25ನೇ ಸಾಲಿನ ಆಯವ್ಯಯದಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ ಲೆಕ್ಕಶೀರ್ಷಿಕೆ 4515 (ಬಂಡವಾಳ/ ವಿ.ಘ.ಯೋ/ಗಿ.ಉ.ಯೋ) ರಡಿ ರೂ.3950.00 ಲಕ್ಷಗಳ ಅನುದಾನ ಒದಗಿಸಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರದ ಪತ್ರದಲ್ಲಿ 2024-25ನೇ ಸಾಲಿನ ಆಯವ್ಯಯದಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ ಒದಗಿಸಲಾಗಿರುವ (ಬಂಡವಾಳ/ವಿ.ಘ.ಯೋ/ ಗಿ.ಉ.ಯೋ) ಅನುದಾನದಲ್ಲಿ ಶೇ.5ರಷ್ಟನ್ನು ಮಂಡಳಿಯ ಅಧ್ಯಕ್ಷರ ವಿವೇಚನಾ ನಿಧಿಯಡಿ ನಿಗಧಿಪಡಿಸಿ, ಮಾನ್ಯ ಅಧ್ಯಕ್ಷರು, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಇವರಿಂದ ಕಾಮಗಾರಿಗಳ ಪ್ರಸ್ತಾವನೆಯನ್ನು ಪಡೆದು ಅನುಷ್ಠಾನಗೊಳಿಸುವಂತೆ ತಿಳಿಸಲಾಗಿದೆ.

ಮೇಲೆ ಓದಲಾದ (3) ರ ಟಿಪ್ಪಣಿಯಲ್ಲಿ ಮಾನ್ಯ ಅಧ್ಯಕ್ಷರು, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಮಾನ್ಯ ಯೋಜನಾ ಸಚಿವರು, ಇವರು 2024-25ನೇ ಸಾಲಿನ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷರ ವಿವೇಚನಾ ಕೋಟಾದಡಿ ಲಭ್ಯವಿರುವ ರೂ.197.50 ಲಕ್ಷಗಳಲ್ಲಿ, ಅಂದಾಜು ಮೊತ್ತ **ರೂ.147.50** ಲಕ್ಷಗಳ 11 ಕಾಮಗಾರಿಗಳ ಪ್ರಸ್ತಾವನೆಯನ್ನು ಸಲ್ಲಿಸಿ ಕೆ.ಆರ್.ಐ.ಡಿ.ಎಲ್, ನಿರ್ಮಿತಿ ಕೇಂದ್ರ ಚಿತ್ರದುರ್ಗ ಮತ್ತು ಪಿ.ಆರ್ ಇ.ಡಿ. ಮುಖೇನ ಅನುಷ್ಠಾನಗೊಳಿಸುವಂತೆ ತಿಳಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಮಂಡಳಿಯ ಅಧ್ಯಕ್ಷರ ವಿವೇಚನಾ ಕೋಟಾದಡಿ ರೂ.**197.50** ಲಕ್ಷಗಳ 11 ಕಾಮಗಾರಿಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡಲು ಸರ್ಕಾರವು ಉದ್ದೇಶಿಸಿದ್ದು, ಅದರಂತೆ ಈ ಆದೇಶ.

**ಸರ್ಕಾರ ಆದೇಶ ಸಂಖ್ಯೆ:ಪಿಡಿಎಸ್ 72 ಪಿಟಿಪಿ 2024, ಬೆಂಗಳೂರು**
**ದಿನಾಂಕ:12.09.2024**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ 2024-25ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗಿರುವ ರೂ.**3950.00** ಲಕ್ಷಗಳ (ಬಂಡವಾಳ/ ವಿ.ಘ.ಯೋ/ ಗಿ.ಉ.ಯೋ) ಅನುದಾನದಲ್ಲಿ ಅಧ್ಯಕ್ಷರ ವಿವೇಚನಾ ನಿಧಿ (PDQ)ಗೆಂದು ಮೀಸಲಿಟ್ಟ ಅನುದಾನ ರೂ.**197.50** ಲಕ್ಷಗಳಲ್ಲಿ, ಅಂದಾಜು ಮೊತ್ತ ರೂ.147.50 (ರೂ.ನೂರ ನಲವತ್ತೇಳು ಲಕ್ಷ ಐವತ್ತು ಸಾವಿರಗಳು ಮಾತ್ರ) ಲಕ್ಷಗಳನ್ನು

**ಅನುಬಂಧ-1ರಲ್ಲಿ** ನಮೂದಿಸಿರುವ **11** ಕಾಮಗಾರಿಗಳ ಕ್ರಿಯಾಯೋಜನೆಗೆ ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

**ಷರತ್ತುಗಳು:-**

1. ಅನುಮೋದನೆ ನೀಡಿರುವ ಕ್ರಿಯಾಯೋಜನೆಯ ಕಾಮಗಾರಿಗಳನ್ನು 2024-25ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ **ಕೆ.ಟಿ.ಪಿ.ಪಿ ಕಾಯ್ದೆಯನ್ವಯ** ನಿಯಮಾನುಸಾರ ಅನುಷ್ಠಾನಗೊಳಿಸತಕ್ಕದ್ದು.
2. ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಮಾರ್ಗಸೂಚಿಯನ್ವಯ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.
3. SCP/TSP ಕಾಮಗಾರಿಗಳನ್ನು SCP/TSP ಕಾಯ್ದೆ 2013ರನ್ವಯ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಸಮುದಾಯದವರಿಗೆ ಉಪಯೋಗವಾಗುವಂತೆ ಅನುಷ್ಠಾನಗೊಳಿಸತಕ್ಕದ್ದು.
4. ಕ್ರಿಯಾಯೋಜನೆಗೆ ಅನುಮೋದನೆ ನೀಡಿರುವ ಅಂದಾಜು ಮಿತಿಯಲ್ಲಿಯೇ (ಟೆಂಡರ್ ಪ್ರೀಮಿಯಂ ಸೇರಿ) ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವು ಸರ್ಕಾರವು ಆಯಾ ಸಂದರ್ಭದಲ್ಲಿ ಹೊರಡಿಸುವ ಆದೇಶ ಮತ್ತು ಸುತ್ತೋಲೆಗೆ ಒಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಚಂದ್ರಶೇಖರಯ್ಯ)
ನಿರ್ದೇಶಕರು,
ಪ್ರದೇಶಾಭಿವೃದ್ಧಿ ಮಂಡಳಿ ವಿಭಾಗ.
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು,(ಲೆಕ್ಕ ಪತ್ರ)/(ಲೆಕ್ಕ ಪರಿಶೋಧನಾ ಮತ್ತು 1&2, ಕರ್ನಾಟಕ, ಬೆಂಗಳೂರು.
2. ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಆಪ್ತ ಕಾರ್ಯದರ್ಶಿ , ವಿಕಾಸಸೌಧ, ಬೆಂಗಳೂರು.
3. ಕಾರ್ಯದರ್ಶಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಮೈದಾನ್ ಮಹಲ್, ತಮಟಕಲ್ಲು ರಸ್ತೆ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.
4. ಮಾನ್ಯ ಅಧ್ಯಕ್ಷರು, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಇವರ ಆಪ್ತ ಕಾರ್ಯದರ್ಶಿ, ಚಿತ್ರದುರ್ಗ.
5. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
6. ಶಾಖಾಧಿಕಾರಿ, ಸ್ಕೀಮರ ಶಾಖೆ, ಯೋಜನಾ ಇಲಾಖೆ. (ಕಾಂಪೆಂಡಿಯಮ್ ಗೋಸ್ಕರ)
7. ಶಾಖಾರಕ್ಷಾ ಕಡತ/ಹೆಚ್ಚುವರಿ ಪ್ರತಿ.

*****

## ಅನುಬಂಧ-1

## 2024-25ನೇ ಸಾಲಿನ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಮಾನ್ಯ ಅಧ್ಯಕ್ಷರ ವಿವೇಚನಾ ನಿಧಿಯಡಿ ಕಾಮಗಾರಿಗಳ ಕ್ರಿಯಾ ಯೋಜನೆ ವಿವರ

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಕಾಮಗಾರಿ ವಿವರ | ಅನುದಾನದ ಮೊತ್ತ |
|---|---|---|
| 1 | ಮಾಗಡಿ ತಾಲ್ಲೂಕು, ಮಾದಿಗೊಂಡನಹಳ್ಳಿ ಮತ್ತು ಅರಳಿಮರದ ಪಾಳ್ಯದಲ್ಲಿ ಕಾಂಕ್ರೀಟ್ ರಸ್ತೆ ಮತ್ತು ಚರಂಡಿ ನಿರ್ಮಾಣದ ಮುಂದುವರೆದ ಕಾಮಗಾರಿಗಳು. | 40.00 |
| 2 | ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಂಚೇನಹಳ್ಳಿ ತಾಲ್ಲೂಕು, ಕಂಭತ್ತನಹಳ್ಳಿ ಗ್ರಾಮದ ವಾಟರ್ ಫಿಲ್ಟರ್ ಬಳಿಯಿಂದ ಸ್ಮಶಾನದವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿ | 4.95 |
| 3 | ಚಿಕ್ಕಬಳ್ಳಾಪುರ ತಾಲ್ಲೂಕು ವ್ಯಾಪ್ತಿಯ ಕಂಭತ್ತನಹಳ್ಳಿ ಗ್ರಾಮದ ಸ್ಮಶಾನದಿಂದ ಮಚೇನಹಳ್ಳಿ ಕೆರೆ ಕೋಡಿಯವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿ. | 4.95 |
| 4 | ಚಿಕ್ಕಬಳ್ಳಾಪುರ ತಾಲ್ಲೂಕು ವ್ಯಾಪ್ತಿಯ ರಾಯನಕಲ್ಲು ಗ್ರಾಮದ ಚೌಡೇಶ್ವರಿ ದೇವಾಲಯದ ಬಳಿಯಿಂದ ಕೆರೆಯವರೆಗೂ ರಸ್ತೆ ಅಭಿವೃದ್ಧಿ ಕಾಮಗಾರಿ. | 4.95 |
| 5 | ಹಿರಿಯೂರು ವಿಧಾನಸಭಾ ಕ್ಷೇತ್ರದ ವಿ.ಕೆ.ಗುಡ್ಡ ಗ್ರಾಮದ ಗುರುಲಿಂಗಪ್ಪ ಬಿನ್ ಕರಿಯಪ್ಪ ಇವರ ರಿ.ಸರ್ವೆ ನಂ.373 ರ ಜಮೀನಿನಲ್ಲಿ ಭೂ ಅಭಿವೃದ್ಧಿ ಕಾಮಗಾರಿ. | 4.95 |
| 6 | ಹಿರಿಯೂರು ವಿಧಾನಸಭಾ ಕ್ಷೇತ್ರದ ಭರಂಪುರ ರಿ.ಸ.ನಂ.124/6 ರಲ್ಲಿ ಚೆಕ್ ಡ್ಯಾಂ ನಿರ್ಮಾಣ. | 4.95 |
| 7 | ಹಿರಿಯೂರು ವಿಧಾನಸಭಾ ಕ್ಷೇತ್ರದ ಗುಯಿಲಾಳು ಗ್ರಾಮದ ರಾಷ್ಟ್ರೀಯ ಹೆದ್ದಾರಿ 48ರ ಗುಯಿಲಾಳು ಟೋಲ್ ಪಕ್ಕದಲ್ಲಿರುವ ಶ್ರೀ ಸಾಯಿ ಬಾಬಾ ಮಂದಿರದಲ್ಲಿ ಭೋಜನಾಲಯ ನಿರ್ಮಾಣ. | 50.00 |
| 8 | ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಕ್ಯಾದಿಗುಂಟೆ ಗ್ರಾಮದ ದೇವೀರಮ್ಮ ಕೋಂ. ರಾಮಣ್ಣ ಇವರ ರಿ.ಸ.ನಂ.16 ರಲ್ಲಿ ಚೆಕ್ ಡ್ಯಾಂ ನಿರ್ಮಾಣ | 4.95 |
| 9 | ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ವಿಶ್ವನಾಥಪುರ ಗ್ರಾಮದ ರಿ.ಸ.ನಂ.14/18 ರಲ್ಲಿ ಚೆಕ್ ಡ್ಯಾಂ ನಿರ್ಮಾಣ. | 20.00 |
| 10 | ಹೊಸಯಳನಾಡು ಗ್ರಾಮದ ಗಿರಿಯಮ್ಮ ಮನೆಯಿಂದ ಪಶು ಆಸ್ಪತ್ರೆವರೆಗೆ ರಸ್ತೆ ಅಭಿವೃದ್ಧಿ. | 4.80 |
| 11 | ವಿವಿಧ ಅಭಿವೃದ್ಧಿ ಕಾಮಗಾರಿಗಳು-ಸ.ಹಿ.ಪ್ರಾ.ಶಾಲೆ, ಹೊದಲೂರು ಗ್ರಾಮ, ಗುಬ್ಬಿ ತಾಲ್ಲೂಕು ತುಮಕೂರು ಇಲ್ಲಿ ಶುದ್ಧ ಕುಡಿಯುವ ನೀರಿನ ಯಂತ್ರವನ್ನು ಅಳವಡಿಸುವುದು. | 3.00 |
| | **ಒಟ್ಟು ರೂ.** | **147.5** |

ನಿರ್ದೇಶಕರು,
ಪ್ರದೇಶಾಭಿವೃದ್ಧಿ ಮಂಡಳಿ ವಿಭಾಗ,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ